# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

| | |
|---|---|
| ಸಂಖ್ಯೆ:ಕಅ/ಕೇಂಕ/ಪಿಆರ್/844/21-22 | ವಿಶೇಷ ಆಯುಕ್ತರು (ಕಲ್ಯಾಣ) ರವರ ಕಛೇರಿ<br>ಬೆಂಗಳೂರು, ದಿನಾಂಕ: 18-03-2022 |

## ಸಾರ್ವಜನಿಕ ಪತ್ರಿಕಾ ಪ್ರಕಟಣೆ

| | |
|---|---|
| ವಿಷಯ:- | 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸುವ ಬಗ್ಗೆ. |
| ಉಲ್ಲೇಖ:- | 1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಲ್ಯಾಣ ಕಾರ್ಯಕ್ರಮಗಳ ಕ್ರಿಯಾಯೋಜನೆಯ ಸಂಖ್ಯೆ:ಕಅ/ಕೇಂಕ/ಪಿಆರ್/844/21-22 |

*-*-*-*-*-*

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಪಾಲಿಕೆ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ವಿಶೇಷ ಚೇತನರು ಹಾಗೂ ಸಾಮಾನ್ಯ ವರ್ಗ, ಟ್ರಾನ್ಸ್‌ಜೆಂಡರ್ಸ್ ಸಮುದಾಯದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗದವರ ಕಲ್ಯಾಣ ಕಾರ್ಯಕ್ರಮಗಳು 24.10% | |
|---|---|
| ಕ್ರಮ ಸಂಖ್ಯೆ | ಪಾಲಿಕೆಯ ಗ್ರೂಪ್-ಡಿ ನೌಕರರ/ಗ್ಯಾಂಗ್‌ಮೆನ್‌ಗಳ ಮತ್ತು ತೋಟಗಾರಿಕೆ ಮಾಲಿಗಳ ಮಕ್ಕಳಿಗೆ ವಿದ್ಯಾರ್ಥಿ ವೇತನ (ಪಿ.ಕೋಡ್-0224) |
| 1 | ಪಾಲಿಕೆಯ ಖಾಯಂ/ಗುತ್ತಿಗೆ ಪೌರಕಾರ್ಮಿಕರು/ಸಫಾಯಿ ಕರ್ಮಚಾರಿಗಳು ಹಾಗೂ ಪಾಲಿಕೆಯ ವತಿಯಿಂದ ಈಗಾಗಲೇ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಕುಟುಂಬದ ಒಂದು ಮಗ ಅಥವಾ ಮಗಳಿಗೆ ಮಾತ್ರ ಸರ್ಕಾರಿ ಅಥವಾ ಖಾಸಗಿ ಶಾಲಾ/ಕಾಲೇಜುಗಳಲ್ಲಿ 1ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶುಲ್ಕ ಮರುಪಾವತಿ (ಪಾವತಿಸಿರುವ ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಮೊತ್ತ ಗರಿಷ್ಠ ರೂ.50,000/-ಮೀರದಂತೆ) (ಮೇಲ್ಕಂಡ ನೌಕರರಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ) |
| ಪಾಲಿಕೆ ಪೌರಕಾರ್ಮಿಕರಿಗೆ ಆರೋಗ್ಯ ಕಾರ್ಯಕ್ರಮ,ಪಿ-3820 | |
| 1. | ವೈದ್ಯಕೀಯ ಸಹಾಯ, ಗಂಭೀರ ಸ್ವರೂಪ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಆರ್ಥಿಕ ಸಹಾಯಧನ |

| | |
|---|---|
| **ಖಾಯಂ/ಗುತ್ತಿಗೆ ಪೌರಕಾರ್ಮಿಕರಿಗೆ ಕಲ್ಯಾಣ ಕಾರ್ಯಕ್ರಮಗಳು ಈ ಕೆಳಕಂಡ ಕಾರ್ಯಕ್ರಮಗಳನ್ನು ಪೌರಕಾರ್ಮಿಕರ ಕುಟುಂಬ ವರ್ಗದವರಿಗೆ ಸೌಲಭ್ಯಗಳನ್ನು ಒದಗಿಸುವುದು.ಪಿ-3831.** | |
| 1 | ಬ್ಯೂಟಿ ಪಾರ್ಲರ್ ತರಬೇತಿ ವೃತ್ತಿ ಪ್ರಾರಂಭಿಸಲು ಗರಿಷ್ಠ ರೂ.25,000 ಧನಸಹಾಯ. |
| 2 | ಫ್ಯಾಷನ್ ಡಿಸೈನಿಂಗ್ ತರಬೇತಿ ವೃತ್ತಿ ಪ್ರಾರಂಭಿಸಲು ಗರಿಷ್ಠ 50,000/- ಧನಸಹಾಯ |
| 3 | ರಾಜ್ಯ, ರಾಷ್ಟ್ರೀಯ ಅಥವಾ ಅಂತರ ರಾಷ್ಟ್ರೀಯ ಮಟ್ಟದ ಕ್ರೀಡೆ/ಕಲೆ/ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಧನ ಸಹಾಯ. ಅರ್ಹ ಅಂಗವಿಕಲರಿಗೆ ಆದ್ಯತೆ ನೀಡುವುದು. |
| **ಪರಿಶಿಷ್ಟ ಜಾತಿ/ಪಂಗಡದ ಡಿ ಗ್ರೂಪ್ ನೌಕರರಿಗೆ ಸಹಾಯ ಧನ (ಖಾಯಂ ಚಾಲಕರು ಹಾಗೂ ಹೊರ ಗುತ್ತಿಗೆ ನೌಕರರು),ಪಿ-3313** | |
| 1. | ಪಾಲಿಕೆಯ ಗ್ರೂಪ್-ಡಿ ನೌಕರರ/ಚಾಲಕರು ಒಂದು ಮಗ ಅಥವಾ ಮಗಳಿಗೆ ಮಾತ್ರ ಸರ್ಕಾರಿ ಅಥವಾ ಖಾಸಗಿ ಶಾಲಾ/ಕಾಲೇಜುಗಳಲ್ಲಿ 1ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶುಲ್ಕ ಮರುಪಾವತಿ (ಪಾವತಿಸಿರುವ ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಮೊತ್ತ ಗರಿಷ್ಟ ರೂ.50,000/-ಮೀರದಂತೆ)<br>(ಮೇಲ್ಕಂಡ ನೌಕರರಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ) |
| **ಪೌರಕಾರ್ಮಿಕರಿಗೆ ವೈಯಕ್ತಿಕ ಮನೆ ನಿರ್ಮಾಣ,ಪಿ-3821** | |
| **ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಆರೋಗ್ಯ ಕಾರ್ಯಕ್ರಮ,ಪಿ-3822** | |
| 1. | ವೈದ್ಯಕೀಯ ಸಹಾಯ, ಗಂಭೀರ ಸ್ವರೂಪ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಆರ್ಥಿಕ ಸಹಾಯ ಧನ |
| **ಪರಿಶಿಷ್ಟ ಜಾತಿ/ಪಂಗಡ ವರ್ಗದವರಿಗೆ ಶೈಕ್ಷಣಿಕ ಕಾರ್ಯಕ್ರಮ,ಪಿ-3823** | |
| 1. | ಸರ್ಕಾರಿ ಅಥವಾ ಖಾಸಗಿ ಶಾಲಾ/ಕಾಲೇಜುಗಳಲ್ಲಿ 1ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶುಲ್ಕ ಮರುಪಾವತಿ (ಪಾವತಿಸಿರುವ ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಮೊತ್ತ ಗರಿಷ್ಟ ರೂ.50,000/-ಮೀರದಂತೆ) |
| **ಪಾಲಿಕೆ ವ್ಯಾಪ್ತಿಯ ರುದ್ರಭೂಮಿ/ಸ್ಮಶಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಿಗೆ ಮನೆ ನಿರ್ಮಾಣ,ಪಿ-3629** | |

**ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ಕಲ್ಯಾಣ ಕಾರ್ಯಕ್ರಮಗಳು**

| |
|---|
| **ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದರಿಗೆ ಆರೋಗ್ಯ ಕಾಯಕ್ರಮ.ಪಿ-3826** |

| | |
|---|---|
| | |
| 1. | 1. ವೈದ್ಯಕೀಯ ಸಹಾಯ, ಗಂಭೀರ ಸ್ವರೂಪ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಆರ್ಥಿಕ ಸಹಾಯಧನ |

| | |
|---|---|
| **ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದರಿಗೆ ವಿದ್ಯರ್ಥಿಗಳಿಗೆ ಶುಲ್ಕ ಮರುಪಾವತಿಪಿ–3827.** | |
| 1. | ಪಾಲಿಕೆಯ ಗ್ರೂಪ್–ಡಿ ನೌಕರರ/ಗ್ಯಾಂಗ್ ಮ್ಯಾನ್ ಮತ್ತು ತೋಟಗಾರಿಕೆ ಮಾಲಿಗಳ ಕುಟುಂಬದ ಒಂದು ಮಗ ಅಥವಾ ಮಗಳಿಗೆ ಮಾತ್ರ ಮತ್ತು ಪಾಲಿಕೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಅಥವಾ ಖಾಸಗಿ ಶಾಲಾ/ಕಾಲೇಜುಗಳಲ್ಲಿ 1ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಶುಲ್ಕ ಮರುಪಾವತಿ (ಪಾವತಿಸಿರುವ ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಮೊತ್ತ ಗರಿಷ್ಟ ರೂ.50,000/–ಮೀರದಂತೆ) (ಮೇಲ್ಕಂಡ ನೌಕರರಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ) |

**ವಿಶೇಷ ಚೇತನರು ಹಾಗೂ ಅಂಗವಿಕಲರ ಕಲ್ಯಾಣ ಕಾರ್ಯಕ್ರಮಗಳು:–**

| | |
|---|---|
| **ದಿವ್ಯಾಂಗ ವ್ಯಕ್ತಿಗಳಿಗೆ ತ್ರಿಚಕ್ರವಾಹನ ವಿತರಣೆ,ಪಿ–3620** | |
| **ವಿಶೇಷ ಚೇತನದವರಿಗೆ ಆರೋಗ್ಯ ಕಾರ್ಯಕ್ರಮ,ಪಿ–3830** | |
| 1. | ಕೃತಕ ಅಂಗ ಜೋಡಣೆಗೆ ಸಹಾಯಧನ |
| 2. | ಅಂಗವಿಕಲರ ಹಕ್ಕುಗಳ ಕಾಯ್ದೆ 2016ರ ಅನ್ವಯ ಗುರುತಿಸಿರುವ 21 ಅಂಗವೈಕಲ್ಯಗಳನ್ನು ಸರಿಪಡಿಸುವ ಸಲುವಾಗಿ ನಡೆಸುವ ಶಸ್ತ್ರ ಚಿಕಿತ್ಸೆಗೆ ಗರಿಷ್ಠ ರೂ.50,000/–ಗಳ ವರೆಗೆ ಧನಸಹಾಯ |
| 3. | ದೈಹಿಕ ವ್ಯಾಯಮ (Physiotheropy) ಮತ್ತು ಮಾತಿನ ವ್ಯಾಯಮಕ್ಕೆ (Speechtheropy) ಕ್ಕಾಗಿ ಸಹಾಯ ಧನ |
| **ವಿಶೇಷ ಚೇತನದವರಿಗೆ ಶೈಕ್ಷಣಿಕ ಕಾರ್ಯಕ್ರಮ,ಪಿ–3831** | |
| 1. | ಸರ್ಕಾರಿ ಅಥವಾ ಖಾಸಗಿ ಶಾಲಾ/ಕಾಲೇಜುಗಳಲ್ಲಿ 1ನೇ ತರಗತಿಯಿಂದ ಪದವಿವರೆಗೆ ವ್ಯಾಸಂಗ ಮಾಡುತ್ತಿರುವ ವಿಶೇಷಚೇತನ ವಿದ್ಯಾರ್ಥಿಗಳಿಗೆ ಹಾಗೂ ವಿಶೇಷ ಚೇತನರ ಕುಟುಂಬದ ಒಂದು ಮಗ ಅಥವಾ ಮಗಳಿಗೆ ಶುಲ್ಕ ಮರುಪಾವತಿ (ಪಾವತಿಸಿರುವ ಬೋಧನಾ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಮೊತ್ತ ಗರಿಷ್ಟ ರೂ.50,000/–ಮೀರದಂತೆ) |
| 2. | ಬುದ್ಧಿಮಾಂದ್ಯ ಮಕ್ಕಳಿಗೆ ವಿದ್ಯಾಬ್ಯಾಸಕ್ಕಾಗಿ ಆರ್ಥಿಕ ಸಹಾಯ |
| 3. | ಶೇ.45 ಕ್ಕಿಂತ ಹೆಚ್ಚು ವಿಕಲತೆ ಹೊಂದಿರುವ ಪೋಷಕರ ಮಕ್ಕಳಿಗೆ ಹಾಗೂ ವಿಶೇಷ ಚೇತನರ ಔಪಚಾರಿಕ ಹಾಗೂ ಅನೌಪಚಾರಿಕ (Formal&Nonformal) ಶಿಕ್ಷಣಕ್ಕಾಗಿ ಗರಿಷ್ಠ ರೂ.50,000/– ಗಳ ಆರ್ಥಿಕ ಸಹಾಯ. |
| | **ವಿಶೇಷ ಚೇತನದವರಿಗೆ ಆರ್ಥಿಕ ಸಹಾಯ,ಪಿ–3831** |
| 1. | ಚಿಲ್ಲರೆ ಅಂಗಡಿ, ಪೋನ್ ಬೂತ್, ಸಂಗೀತ ಸಾಧನ, ತಳ್ಳುವ ಗಾಡಿ, ಹೊಲಿಗೆ ಯಂತ್ರ ಇತ್ಯಾದಿಗಳನ್ನು ಒದಗಿಸುವುದು. |

| | |
|---|---|
| 2. | ಬ್ಯೂಟಿ ಪಾರ್ಲರ್ ವೃತ್ತಿ ಪ್ರಾರಂಭಿಸಲು ಧನಸಹಾಯ ಗರಿಷ್ಠ ರೂ.25,000/- |
| 3. | ಫ್ಯಾಷನ್ ಡಿಸೈನಿಂಗ್ ವೃತ್ತಿ ಪ್ರಾರಂಭಿಸಲು ಗರಿಷ್ಠ 50,000/- ಧನಸಹಾಯ. |
| 4. | ಸಣ್ಣ ಉದ್ದಿಮೆದಾರರಿಗೆ ಸಹಾಯ ಧನ |

**ಆರ್ಥಿಕವಾಗಿ ಹಿಂದುಳಿದ ವರ್ಗದವರ ಕಲ್ಯಾಣ ಕಾರ್ಯಕ್ರಮಗಳು**

**ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಸಹಾಯಧನ,ಪಿ-2975**

**ಯೋಜನೆಗಳನ್ನು ಪಡೆಯಲು ಅಭ್ಯರ್ಥಿಗೆ ಇರಬೇಕಾದ ಅರ್ಹತೆಗಳು ಹಾಗೂ ಮಾನದಂಡಗಳು**

| ಕ್ರ.ಸಂ | ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳ ವಿವರ |
|---|---|
| 1. | ಅರ್ಜಿದಾರರು ಪಾಲಿಕೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಫಲಾನುಭವಿಗಳಿಗೆ ಮಾತ್ರ |
| 2. | ಈ ಸಾಲಿನ ಎಲ್ಲಾ ಕಾರ್ಯಕ್ರಮಗಳ ಪೈಕಿ ಒಂದು ಕುಟುಂಬದಲ್ಲಿ ಯಾವುದಾದರೂ ಒಂದು ಯೋಜನೆಗೆ ಒಬ್ಬರು ಮಾತ್ರ ಅರ್ಹರಾಗಿರುತ್ತಾರೆ. |
| 3. | ಆರ್ಥಿಕ ಮತ್ತು ಇತರೆ ಕಾರ್ಯಕ್ರಮಗಳ ಯೋಜನೆಗೆ ನಿಗಧಿಪಡಿಸಿರುವ ಅಭ್ಯರ್ಥಿಗಳ ವಯೋಮಿತಿ ಪರಿಶಿಷ್ಟ ಜಾತಿ/ಪಂಗಡದವರಿಗೆ/ಹಿಂದುಳಿದ ಅಲ್ಪ ಸಂಖ್ಯಾತ ವರ್ಗದವರಿಗೆ ಕನಿಷ್ಟ 18 ವರ್ಷಗಳು ಶೈಕ್ಷಣಿಕ ಕಾರ್ಯಕ್ರಮಗಳಿಗೆ ಕನಿಷ್ಟ 15 ವರ್ಷ (ಪೌರಕಾರ್ಮಿಕರನ್ನು ಹೊರತುಪಡಿಸಿ) |
| 4. | ಪರಿಶಿಷ್ಟ ಜಾತಿ/ಪಂಗಡದವರು / ಹಿಂದುಳಿದ ಅಲ್ಪ ಸಂಖ್ಯಾತ ವರ್ಗದವರಿಗೆ ತಹಸೀಲ್ದಾರ್ ರವರಿಂದ ಗಣಕೀಕೃತ ಜಾತಿ ಪ್ರಮಾಣ ಪತ್ರ ಹಾಗೂ ಪ್ರಸಕ್ತ ಸಾಲಿನ ಆದಾಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು. ಸಾಮಾನ್ಯ ಸೌಲಭ್ಯಗಳಿಗೆ ರೂ.1.00 ಲಕ್ಷಗಳ ಹಾಗೂ ವಿದ್ಯಾಭ್ಯಾಸಕ್ಕೆ ಸಂಬಂಧಿಸಿದಂತೆ ಸೌಲಭ್ಯವನ್ನು ಪಡೆಯಲು ರೂ.2.00 ಲಕ್ಷಗಳ ಮೀರದೆ ವಾರ್ಷಿಕ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು, (ವಿದ್ಯಾಭ್ಯಾಸಕ್ಕೆ ಎಲ್ಲಾ ಅಭ್ಯರ್ಥಿಯ ಹೆಸರಿನಲ್ಲಿ ಜಾತಿ / ಪಂಗಡ,/ ಹಿಂದುಳಿದ ಅಲ್ಪ ಸಂಖ್ಯಾತ ವರ್ಗದವರ ಆದಾಯ ಪ್ರಮಾಣ ಪತ್ರವಿರಬೇಕು) |
| 5. | ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗೆ ಪಾಲಿಕೆಯ ಸಿಬ್ಬಂದಿಗಳಿಗೆ (ಪೌರಕಾರ್ಮಿಕರು, ನಾಲ್ಕನೇ ದರ್ಜೆ ನೌಕರರು ಮತ್ತು ಚಾಲಕರಿಗೆ ಸಂಬಂಧಿಸಿದಂತೆ (ಸದರಿಯವರ ಕಾರ್ಯನಿರ್ವಹಿಸುತ್ತಿರುವ ಕಛೇರಿಯ ಬಟವಾಡೆ ಅಧಿಕಾರಿಯವರಿಂದ ಅವಲಂಬಿತರ ದೃಢೀಕರಣ ಪತ್ರ ಮತ್ತು ವಾರ್ಷಿಕ ವೇತನ ಪ್ರಮಾಣ ಪತ್ರವನ್ನು ಸಲ್ಲಿಸುವುದು) |
| 6. | ಅರ್ಜಿದಾರರು ವಯೋಮಿತಿ ದೃಢೀಕರಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ/ ಶಾಲಾ-ಕಾಲೇಜಿನ ವರ್ಗಾವಣೆ ಪ್ರಮಾಣ ಪತ್ರ/ ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸಬೇಕು. |
| 7. | ಅಭ್ಯರ್ಥಿಗಳು ಅರ್ಜಿಯೊಂದಿಗೆ 3 ಇತ್ತೀಚಿನ ಭಾವಚಿತ್ರ, ಯೋಜನೆಗೆ ನಿಗಧಿಪಡಿಸಿದ ವಿದ್ಯಾರ್ಹತೆಯ ದಾಖಲೆಗಳು ವಾಸಸ್ಥಳ ದೃಢೀಕರಣ ಪತ್ರಗಳಾದ ಮತದಾರರ ಗುರುತಿನ ಚೀಟಿ/ ಪಡಿತರ ಚೀಟಿ/ ಅಡಿಗೆ ಅನಿಲ ರಶೀದಿ/ ಪರವಾನಿಗೆ ಪ್ರತಿಯನ್ನು ಸಲ್ಲಿಸಬೇಕು. |
| 8. | ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಿರುವ ಎಲ್ಲಾ ದಾಖಲೆಗಳನ್ನು (ಜೆರಾಕ್ಸ್ ಪ್ರತಿಗಳನ್ನು) ಗೆಜೆಟೆಡ್ ಅಧಿಕಾರಿಯಿಂದ ಅಥವಾ ನೋಟರಿಯವರಿಂದ ದೃಢೀಕರಿಸಿ ಸಲ್ಲಿಸಬೇಕು. |
| 9. | ಆರ್ಥಿಕ ಸಹಾಯ ಕೋರಿ ಸಲ್ಲಿಸುವ ಅರ್ಜಿದಾರರು ಈ ಹಿಂದೆ |

| | |
|---|---|
| | ಸರ್ಕಾರ/ಸರ್ಕಾರೇತರ ಸಂಸ್ಥೆಗಳಿಂದ ಉಚಿತವಾಗಿ/ ಸಾಲದ ಮುಖಾಂತರ ಇಂತಹ ಯಾವುದೇ/ ಸವಲತ್ತುಗಳನ್ನು ಪಡೆದಿಲ್ಲವೆಂದು ರೂ.20/–ರ ಛಾಪಾ ಕಾಗದದಲ್ಲಿ ಮುಚ್ಚಳಿಕೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. |
| **10.** | ವಿವಿಧ ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳನ್ನು ತರಬೇತಿ ನೀಡುವ ಸಂಸ್ಥೆಗಳಿಗೆ ಪ್ರಾಯೋಜಿಸಲಾಗುವುದು. |
| **11.** | ಮೇಲ್ಕಂಡಂತೆ ಆಯೋಜಿಸಿರುವ ಕಲ್ಯಾಣ ಕಾರ್ಯಕ್ರಮಗಳಿಗೆ / ಯೋಜನೆಗಳಿಗೆ ಪಾಲಿಕೆಯು ಹೊರಡಿಸುವ ಮಾರ್ಗಸೂಚಿಗಳ ಮಾನದಂಡಗಳನ್ವಯ ಫಲಾನುಭವಿಗಳನ್ನು ಆಯ್ಕೆ ಮಾಡುವುದರಿಂದ ಸೌಲಭ್ಯಗಳನ್ನು ಪಡೆಯಲು ಹೆಚ್ಚಿನ ದಾಖಲಾತಿಗಳನ್ನು ಸಲ್ಲಿಸುವ ಬಗ್ಗೆ ಪೂರ್ವ ವಲಯ ಕಲ್ಯಾಣ ವಿಭಾಗಕ್ಕೆ ಸಂಪರ್ಕಿಸಿ ಸಂಪೂರ್ಣ ಮಾಹಿತಿಯನ್ನು ಪಡೆದುಕೊಂಡು ಅರ್ಜಿಯನ್ನು ಸಲ್ಲಿಸುವುದು. |
| **12.** | ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ / ಪಾಲಿಕೆಯು ಆಗಿಂದ್ದಾಗೆ ಸುತ್ತೋಲೆ / ಮಾರ್ಗಸೂಚಿಗಳಿಗೆ ಅನುಗುಣವಾಗಿ ಅಭ್ಯರ್ಥಿಗಳ ಆಯ್ಕೆ ಮಾಡಲಾಗುವುದು. |

ಅರ್ಜಿ ಸಲ್ಲಿಸಲು ಇಚ್ಛಿಸುವವರು ಪಾಲಿಕೆಯ ಅಂತರ್ಜಾಲವಾದ https://site.bbmp.gov.in/departmentwebsites/welfare/welfareactivities.html ಇಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ವಲಯದ ಕಛೇರಿಗೆ ಸಲ್ಲಿಸಬಹುದಾಗಿರುತ್ತದೆ ಅಥವಾ ವಲಯಗಳ ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ರವರ ಕಛೇರಿಯಿಂದ ಅರ್ಜಿಯನ್ನು ಪಡೆದು ಪತ್ರಿಕಾ ಪ್ರಕಟಣೆ ದಿನಾಂಕದಿಂದ 30 ದಿನಗಳ ಒಳಗೆ ಭರ್ತಿ ಮಾಡಿ, ಎಲ್ಲಾ ದಾಖಲಾತಿಗಳೊಂದಿಗೆ ಸಲ್ಲಿಸಬೇಕು ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಛೇರಿಯ ಇ-ಮೇಲ್ ವಿಳಾಸ: welfarebbmp@gmail.com ಗೆ ಸಂಪರ್ಕಿಸುವುದು ಮತ್ತು ವಲಯದ ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ರವರ ಕಛೇರಿಗೆ ಭೇಟಿ ಮಾಡತಕ್ಕದ್ದು.

**ವಿಶೇಷ ಆಯುಕ್ತರು (ಕಲ್ಯಣ) ರವರ ಆದೇಶದ ಮೇರೆಗೆ)**

**ಉಪ ಆಯುಕ್ತರು (ಕಲ್ಯಾಣ)**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.**

***ಪ್ರತಿಯನ್ನು:-***

1. ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಹಣಕಾಸು) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಎಲ್ಲಾ ವಲಯದ ಜಂಟಿ ಆಯುಕ್ತರು ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಲೆಕ್ಕಾಧಿಕಾರಿಗಳು, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ಕಳುಹಿಸಿದೆ.
5. ಸಾರ್ವಜನಿಕ ಸಂಪರ್ಕಾಧಿಕಾರಿ ರವರ ಕಛೇರಿಗೆ ಸಲ್ಲಿಸುತ್ತಾ ಪ್ತರಿಕಾ ಪ್ರಕಟಣೆ ಹೊರಡಿಸಲು ಕೋರಿದೆ.
6. ವಲಯದ ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ–ಪೂರ್ವ, ಪಶ್ಚಿಮ, ದಕ್ಷಿಣ, ಬೊಮ್ಮನಹಳ್ಳಿ, ರಾ.ರಾ.ನಗರ, ದಾಸರಹಳ್ಳಿ, ಯಲಹಂಕ ಮತ್ತು ಮಹದೇವಪುರ) ರವರ ಅಗತ್ಯ ಕ್ರಮಕ್ಕೆ.
7. ಕಛೇರಿಯ ಸೂಚನಾ ಫಲಕಕ್ಕೆ.
8. ಕಛೇರಿ ಪ್ರತಿ/ ಕಡತದ ಪ್ರತಿ.

# ಆರ್ಥಿಕವಾಗಿ ಹಿಂದುಳಿದವರಿಂದ ಅರ್ಜಿ ಆಹ್ವಾನ

ಬೆಂಗಳೂರು, ಮಾ.19: 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ವಿಶೇಷ ಚೇತನರು ಹಾಗೂ ಸಾಮಾನ್ಯ ವರ್ಗ, ತೃತೀಯ ಲಿಂಗಿಗಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗದವರ ಕಲ್ಯಾಣ ಕಾರ್ಯಕ್ರಮಗಳಾದ ಪಾಲಿಕೆಯ ಗ್ರೂಪ್-ಡಿ ನೌಕರರ/ಗ್ಯಾಂಗ್ ಮೆನ್‌ಗಳ ಮತ್ತು ತೋಟಗಾರಿಕೆ ಮಾಲಿಗಳ ಮಕ್ಕಳಿಗೆ ವಿದ್ಯಾರ್ಥಿ ವೇತನ, ಪಾಲಿಕೆ ಪೌರಕಾರ್ಮಿಕರಿಗೆ ಆರೋಗ್ಯ ಕಾರ್ಯಕ್ರಮ, ಖಾಯಂ/ಗುತ್ತಿಗೆ ಪೌರಕಾರ್ಮಿಕರಿಗೆ ಕಲ್ಯಾಣ ಕಾರ್ಯಕ್ರಮಗಳು, ಪೌರಕಾರ್ಮಿಕರ ಕುಟುಂಬ ವರ್ಗದವರಿಗೆ ಸೌಲಭ್ಯಗಳನ್ನು ಒದಗಿಸುವುದು, ಪರಿಶಿಷ್ಟ ಜಾತಿ/ಪಂಗಡದ ಡಿ ಗ್ರೂಪ್ ನೌಕರರಿಗೆ ಸಹಾಯಧನ (ಖಾಯಂ ಚಾಲಕರು ಹಾಗೂ ಹೊರ ಗುತ್ತಿಗೆ ನೌಕರರು), ಪೌರಕಾರ್ಮಿಕರಿಗೆ ವೈಯಕ್ತಿಕ ಮನೆ ನಿರ್ಮಾಣ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಆರೋಗ್ಯ ಕಾರ್ಯಕ್ರಮ, ಪರಿಶಿಷ್ಟ ಜಾತಿ/ಪಂಗಡ ವರ್ಗದವರಿಗೆ ಶೈಕ್ಷಣಿಕ ಕಾರ್ಯಕ್ರಮ, ಪಾಲಿಕೆ ವ್ಯಾಪ್ತಿಯ ರುದ್ರಭೂಮಿ/ಸ್ಮಶಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಿಗೆ ಮನೆ ನಿರ್ಮಾಣ. ಹಿಂದುಳಿದ ಮತ್ತು ಅಲ್ಪ ಸಂಖ್ಯಾತ ವರ್ಗದವರಿಗೆ ಆರೋಗ್ಯ ಕಾಯಕ್ರಮ, ವಿದ್ಯರ್ಥಿಗಳಿಗೆ ಶುಲ್ಕ ಮರುಪಾವತಿಸುವುದು, ವಿಶೇಷ ಚೇತನರು ಹಾಗೂ ಅಂಗವಿಕಲರ ಕಲ್ಯಾಣ ಕಾರ್ಯಕ್ರಮಗಳಡಿ ದಿವ್ಯಾಂಗ ವ್ಯಕ್ತಿಗಳಿಗೆ ತ್ರಿಚಕ್ರವಾಹನ ವಿತರಣೆ, ವಿಶೇಷ ಚೇತನದವರಿಗೆ ಆರೋಗ್ಯ ಕಾರ್ಯಕ್ರಮ, ವ್ಯಾಯಮಕ್ಕೆ(Speech-theropy)ಕ್ಕಾಗಿ ಸಹಾಯಧನ, ವಿಶೇಷ ಚೇತನದವರಿಗೆ ಶೈಕ್ಷಣಿಕ ಕಾರ್ಯಕ್ರಮ, ವಿಶೇಷ ಚೇತನದವರಿಗೆ ಆರ್ಥಿಕ ಸಹಾಯ, ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಸಹಾಯಧನ ನೀಡಲಾಗುವುದು.

ಅರ್ಜಿ ಸಲ್ಲಿಸಲು ಇಚ್ಛಿಸುವವರು ಪಾಲಿಕೆಯ ಅಂತರ್ಜಾಲವಾದ https://site.bbmp.gov.in/departmentwebsites/welfare/welfareactivities.html ಇಲ್ಲಿ ಅರ್ಜಿಯನ್ನು ಡೌನ್ಲೋಡ್ ಮಾಡಿಕೊಂಡು ಭರ್ತಿ ಮಾಡಿ ವಲಯದ ಕಚೇರಿಗೆ ಸಲ್ಲಿಸಬಹುದಾಗಿರುತ್ತದೆ. ಅಲ್ಲದೆ ವಲಯಗಳ ಸಹಾಯಕ ಕಂದಾಯ ಅಧಿಕಾರಿ(ಕಲ್ಯಾಣ) ಕಚೇರಿಯಿಂದ ಅರ್ಜಿಯನ್ನು ಪಡೆದು ಪತ್ರಿಕಾ ಪ್ರಕಟಣೆ ದಿನಾಂಕದಿಂದ 30 ದಿನಗಳ ಒಳಗೆ ಭರ್ತಿ ಮಾಡಿ, ಎಲ್ಲಾ ದಾಖಲಾತಿಗಳೊಂದಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಚೇರಿಯ ಇ-ಮೇಲ್ ವಿಳಾಸ: welfarebbmp@gmail.comಗೆ ಸಂಪರ್ಕಿಸುವುದು ಮತ್ತು ವಲಯದ ಸಹಾಯಕ ಕಂದಾಯ ಅಧಿಕಾರಿ(ಕಲ್ಯಾಣ) ಕಚೇರಿಗೆ ಭೇಟಿ ಮಾಡಬಹುದಾಗಿದೆ ಎಂದು ಉಪ ಆಯುಕ್ತರು(ಕಲ್ಯಾಣ) ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಕಲ್ಯಾಣ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:** 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಪಾಲಿಕೆ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ವಿಶೇಷ ಚೇತನರು



ಹಾಗೂ ಸಾಮಾನ್ಯ ವರ್ಗ, ತೃತೀಯ ಲಿಂಗಿಗಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಛಿಸುವವರು ಪಾಲಿಕೆಯ ಅಂತರ್ಜಾಲ https://site.bbmp.gov.in/ departmentwebsites/welfare/ welfareactivities.html ಇಲ್ಲಿ ಅರ್ಜಿಯನ್ನು ಡೌನ್‌ಲೌಡ್ ಮಾಡಿಕೊಂಡು ಭರ್ತಿ ಮಾಡಿ ವಲಯದ ಕಛೇರಿಗೆ ಸಲ್ಲಿಸಬಹುದಾಗಿದೆ. ಅಲ್ಲದೆ ವಲಯಗಳ ಸಹಾಯಕ ಕಂದಾಯ ಅಕಾರಿ(ಕಲ್ಯಾಣ) ರವರ ಕಚೇರಿಯಿಂದ ಅರ್ಜಿಯನ್ನು ಪಡೆದು ಪತ್ರಿಕಾ ಪ್ರಕಟಣೆ ದಿನಾಂಕದಿಂದ 30 ದಿನಗಳ ಒಳಗೆ ಭರ್ತಿ ಮಾಡಿ, ಎಲ್ಲಾ ದಾಖಲಾತಿಗಳೊಂದಿಗೆ ಸಲ್ಲಿಸಬೇಕು ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಛೇರಿಯ ಇ-ಮೇಲ್ ವಿಳಾಸ: welfarebbmpgmail.com ಗೆ ಸಂಪರ್ಕಿಸುವುದು ಎಂದು ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ಬೆಂಗಳೂರು:** 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಬಿಬಿಎಂಪಿ ವತಿಯಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆರ್ಥಿಕವಾಗಿ ಹಿಂದುಳಿದಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ವಿಶೇಷ ಚೇತನರು ಹಾಗೂ ಸಾಮಾನ್ಯ ವರ್ಗ, ತೃತೀಯ ಲಿಂಗಿಗಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಜತೆಗೆ ಪರಿಶಿಷ್ಟ ಜಾತಿ/ಪಂಗಡದ ಡಿ ಗ್ರೂಪ್ ನೌಕರರಿಗೆ ಸಹಾಯ ಧನ (ಕಾಯಂ ಚಾಲಕರು ಹಾಗೂ ಹೊರ ಗುತ್ತಿಗೆ ನೌಕರರು), ಪೌರಕಾರ್ಮಿಕರಿಗೆ ವೈಯಕ್ತಿಕ ಮನೆ ನಿರ್ಮಾಣ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಆರೋಗ್ಯ ಕಾರ್ಯಕ್ರಮ, ಪರಿಶಿಷ್ಟ ಜಾತಿ/ಪಂಗಡ ವರ್ಗದವರಿಗೆ ಶೈಕ್ಷಣಿಕ ಕಾರ್ಯಕ್ರಮ, ಪಾಲಿಕೆ ವ್ಯಾಪ್ತಿಯ ರುದ್ರಭೂಮಿ/ಸ್ಮಶಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ/ಪಂಗಡದವರಿಗೆ ಮನೆ ನಿರ್ಮಾಣ. ವಿಶೇಷ ಚೇತನರು ಹಾಗೂ ಅಂಗವಿಕಲರ ಕಲ್ಯಾಣ ಕಾರ್ಯಕ್ರಮಗಳಡಿ ದಿವ್ಯಾಂಗ ವ್ಯಕ್ತಿಗಳಿಗೆ ತ್ರಿಚಕ್ರವಾಹನ ವಿತರಣೆ, ವಿಶೇಷ ಚೇತನದವರಿಗೆ ಆರೋಗ್ಯ ಕಾರ್ಯಕ್ರಮ, ವ್ಯಾಯಾಮಕ್ಕೆ ಸಹಾಯ ಧನ ನೀಡಲಾಗುತ್ತದೆ. ಅರ್ಜಿಗಳನ್ನು ಸಹಾಯಕ ಕಂದಾಯ ಅಧಿಕಾರಿ(ಕಲ್ಯಾಣ) ಕಚೇರಿಯಿಂದ ಪಡೆಯಬಹುದು. ಮಾಹಿತಿಗೆ 9880044467 ಮತ್ತು elfarebbmp@gmail.com ಅನ್ನು ಸಂಪರ್ಕಿಸಬಹುದಾಗಿದೆ.

# ಪಾಲಿಕೆ ಕಲ್ಯಾಣ ಕಾರ್ಯಕ್ರಮಕ್ಕೆ ಅರ್ಹರಿಂದ ಅರ್ಜಿ ಆಹ್ವಾನ

ಬೆಂಗಳೂರು: ಬಿಬಿಎಂಪಿಯ 2021-22ನೇ ಸಾಲಿನ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಅಂಗವಿಕಲರು ಹಾಗೂ ಸಾಮಾನ್ಯ ವರ್ಗ, ತೃತೀಯ ಲಿಂಗಿಗಳ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಬಿಬಿಎಂಪಿ ವೆಬ್‌ಸೈಟ್ **https://site.bbmp.gov.in/departmentwebsites/welfare/welfareactivities.html** ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ವಲಯದ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಚೇರಿಯ ಇ-ಮೇಲ್ ವಿಳಾಸ **welfarebbmp@gmail.com** ಗೆ ಸಂಪರ್ಕಿಸುವುದು ಮತ್ತು ವಲಯದ ಸಹಾಯಕ ಕಂದಾಯ ಅಧಿಕಾರಿ (ಕಲ್ಯಾಣ) ಅವರ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಬಿಬಿಎಂಪಿ ಕಲ್ಯಾಣ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕಲ್ಯಾಣ ಕಾರ್ಯಕ್ರಮಕ್ಕೆ ಅರ್ಜಿ

ಬೆಂಗಳೂರು: ಬಿಬಿಎಂಪಿಯ 2021-22 ನೇ ಸಾಲಿನ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ವಿಶೇಷ ಚೇತನರು ಹಾಗೂ ಸಾಮಾನ್ಯ ವರ್ಗ, ತೃತೀಯ ಲಿಂಗಿಗಳ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಬಿಬಿಎಂಪಿ ವೆಬ್‌ಸೈಟ್‌ನಲ್ಲಿ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ವಲಯದ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಚೇರಿಯಲ್ಲಿ ಅಥವಾ ವಲಯದ ಸಹಾಯಕ ಕಂದಾಯ ಅಧಿಕಾರಿ(ಕಲ್ಯಾಣ) ರವರ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಬಿಬಿಎಂಪಿ ತಿಳಿಸಿದೆ.

21/3/22

# ಅರ್ಜಿ ಆಹ್ವಾನ

ಬೆಂಗಳೂರು: ನಗರದ ವ್ಯಾಪ್ತಿಯಲ್ಲಿ 2021-22ನೇ ಸಾಲಿನ ಕಲ್ಯಾಣ ಕಾರ್ಯ ಕ್ರಮಗಳನ್ನು ಅನುಷ್ಠಾನಗೊಳಿಸಲು ಬಿಬಿಎಂಪಿಯು ಆರ್ಥಿಕವಾಗಿ ಹಿಂದುಳಿದಿರುವ ಸಾಮಾನ್ಯ ವರ್ಗದವರು, ಪರಿಶಿಷ್ಟ ಜಾತಿ- ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಅಂಗವಿಕಲರು ಹಾಗೂ ತೃತೀಯ ಲಿಂಗಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಕಲ್ಯಾಣ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ, ಪಂಗಡದ ಗ್ರೂಪ್-ಡಿ ನೌಕರರು, ಗ್ಯಾಂಗ್‌ಮನ್, ತೋಟಗಾರಿಕೆ ಮಾಲಿಗಳ ಮಕ್ಕಳಿಗೆ ವಿದ್ಯಾರ್ಥಿವೇತನ, ಡಿ ಗ್ರೂಪ್ ನೌಕರರಿಗೆ ಸಹಾಯಧನ. ಪೌರ ಕಾರ್ಮಿಕರಿಗೆ ಚಿಕಿತ್ಸೆ, ಮನೆ ನಿರ್ಮಾಣ, ಮಕ್ಕಳ ಶಿಕ್ಷಣಕ್ಕೆ ನೆರವು, ಸ್ಮಶಾನದಲ್ಲಿ ಕಾರ್ಯನಿರ್ವಹಿಸುವವರಿಗೂ ಮನೆ ನಿರ್ಮಾಣಕ್ಕೆ ನೆರವು ನೀಡಲಾಗುತ್ತದೆ. ಹಿಂದುಳಿದ, ಅಲ್ಪಸಂಖ್ಯಾತ ವರ್ಗದವರಿಗೆ ಅಂಗವಿಕಲರಿಗೆ ತ್ರಿಚಕ್ರ ವಾಹನ ವಿತರಣೆ, ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ಸಹಾಯಧನ ಒದಗಿಸಲಾಗುತ್ತದೆ. ಬಿಬಿಎಂಪಿಯ ವೆಬ್ ಸೈಟ್‌ನಿಂದ (https://site.bbmp.gov.in/depar tment web sites/welfare) ಅರ್ಜಿ ಡೌನ್‌ಲೋಡ್ ಮಾಡಿಕೊಂಡು ವಲಯದ ಕಚೇರಿಗೆ ಸಲ್ಲಿಸಬಹುದು. ಸಂಪರ್ಕಕ್ಕೆ : ಮುರಳೀಧರ್, ಉಪ ಆಯುಕ್ತರು (ಕಲ್ಯಾಣ), ಬಿಬಿಎಂಪಿ (ಮೊಬೈಲ್: 98800 44467)